ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)

ಆರನೇ ಅಧಿವೇಶನ

ಕಾರ್ಯಕಲಾಪಗಳ ಪಟ್ಟಿ

ಶುಕ್ರವಾರ, ದಿನಾಂಕ 13ನೇ ಮಾರ್ಚ್, 2020

(ಸಮಯ: ಬೆಳಿಗ್ಗೆ 10.00 ಗಂಟೆಗೆ)

----

1. ಪ್ರಶ್ನೋತ್ತರ

ಅ) **ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಏಳನೇ ಪಟ್ಟಿ**

ಆ) **ವರ್ಗಾವಣೆಗೊಂಡ ಪ್ರಶ್ನೆಗಳು:-**

1) ದಿನಾಂಕ: 09.03.2020ರ 3ನೇ ಪಟ್ಟಿಯಿಂದ ವರ್ಗಾವಣೆಗೊಂಡ ಶ್ರೀ ನಿಸರ್ಗ ನಾರಾಯಣಸ್ವಾಮಿ ಎಲ್.ಎನ್. ಇವರ ಪ್ರಶ್ನೆ ಸಂಖ್ಯೆ: 32(752)	:	ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು
2) ದಿನಾಂಕ: 09.03.2020ರ 3ನೇ ಪಟ್ಟಿಯಿಂದ ವರ್ಗಾವಣೆಗೊಂಡ ಶ್ರೀ ಸುರೇಶ್ ಡಿ.ಎಸ್. ಇವರ ಪ್ರಶ್ನೆ ಸಂಖ್ಯೆ: 37(90)	:	ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು

ಇ) **ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಏಳನೇ ಪಟ್ಟಿ**

2. ವರದಿಗಳನ್ನೊಪ್ಪಿಸುವುದು

1) **ಶ್ರೀ ಆರಗ ಜ್ಞಾನೇಂದ್ರ** (ಅಧ್ಯಕ್ಷರು, ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್ ರಾಜ್ ಸಂಸ್ಥೆಗಳ ಸಮಿತಿ) ಅವರು 2019-20ನೇ ಸಾಲಿನ ಕರ್ನಾಟಕ ವಿಧಾನಮಂಡಲದ ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್ ರಾಜ್ ಸಂಸ್ಥೆಗಳ ಸಮಿತಿಯ 31ನೇ ವರದಿಯನ್ನೊಪ್ಪಿಸುವುದು.

2) **ಶ್ರೀ ಕರುಣಾಕರ ರೆಡ್ಡಿ ಜಿ.** (ಸದಸ್ಯರು, ಅಧೀನ ಶಾಸನ ರಚನಾ ಸಮಿತಿ) ಅವರು 2019-20ನೇ ಸಾಲಿನ ಕರ್ನಾಟಕ ವಿಧಾನಮಂಡಲದ ಅಧೀನ ಶಾಸನ ರಚನಾ ಸಮಿತಿಯ 48ನೇ ವರದಿಯನ್ನೊಪ್ಪಿಸುವುದು.

3. ಭಾರತ ಸಂವಿಧಾನದ ಕುರಿತು ಮುಂದುವರೆದ ವಿಶೇಷ ಚರ್ಚೆ

4. ವಿತ್ತೀಯ ಕಾರ್ಯಕಲಾಪಗಳು

2020-21ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲೆ ಸಾಮಾನ್ಯ ಚರ್ಚೆ
ಹಾಗೂ
1 ರಿಂದ 28 ರವರೆಗಿನ ಅನುದಾನ ಬೇಡಿಕೆಗಳ ಮೇಲೆ ಚರ್ಚೆ:

5. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

ಶ್ರೀಯುತರುಗಳಾದ ಹೆಚ್. ಹಾಲಪ್ಪ, ಸಿದ್ದು ಸವದಿ, ಸುಭಾಷ್ ಗುತ್ತೇದಾರ್ ಹಾಗೂ ಕಳಕಪ್ಪ ಜಿ. ಬಂಡಿ ಇವರುಗಳು – ನಗರ ಪ್ರದೇಶಗಳಲ್ಲಿ ಸಕ್ಷಮ ಪ್ರಾಧಿಕಾರದ ಅನುಮೋದನೆಯಾಗದೇ ಇರುವ ನಿವೇಶನಗಳ ಖಾತಾ ದಾಖಲು/ವರ್ಗಾವಣೆಯನ್ನು ಸ್ಥಗಿತಗೊಳಿಸಿರುವುದರಿಂದ ಸಾರ್ವಜನಿಕರಿಗೆ ಉಂಟಾಗಿರುವ ತೊಂದರೆಗಳ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ ಹಾಗೂ ಸರ್ಕಾರದ ಉತ್ತರ.

6. ಗಮನ ಸೆಳೆಯುವ ಸೂಚನೆಗಳು

1) **ಶ್ರೀ ಎ.ಟಿ. ರಾಮಸ್ವಾಮಿ ಅವರು** – ಹಾಸನ ಜಿಲ್ಲೆ ಅರಕೂಲಗೂಡು ವಿಧಾನಸಭಾ ಕ್ಷೇತ್ರದಲ್ಲಿನ ರಸ್ತೆ ಕಾಮಗಾರಿಗಳಿಗೆ ಹಣ ಬಿಡುಗಡೆ ಮಾಡುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

... 3/ ..

2) **ಡಾ|| ಭರತ್ ಶೆಟ್ಟಿ ವೈ. ಅವರು** – ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮಾತೃಪೂರ್ಣ ಯೋಜನೆಯಡಿಯಲ್ಲಿ ವಿತರಿಸಲಾಗುವ ಪೌಷ್ಟಿಕ ಆಹಾರವನ್ನು ಫಲಾನುಭವಿಗಳ ಮನೆಗೆ ನೇರವಾಗಿ ವಿತರಿಸಲು ಕ್ರಮಕೈಗೊಳ್ಳುವ ಬಗ್ಗೆ ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರ ಗಮನ ಸೆಳೆಯುವುದು.

3) **ಶ್ರೀ ದೊಡ್ಡಗೌಡರ ಮಹಾಂತೇಶ ಬಸವಂತರಾಯ ಅವರು** – ಅಣಬೆ ಬೇಸಾಯಗಾರರಿಗೆ ವಿದ್ಯುತ್ ಸಹಾಯಧನ ಸೇರಿದಂತೆ ಇತರೆ ಉತ್ತೇಜನಗಳನ್ನು ನೀಡುವ ಬಗ್ಗೆ ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರ ಗಮನ ಸೆಳೆಯುವುದು.

4) **ಶ್ರೀ ಎಸ್. ಕುಮಾರ್ ಬಂಗಾರಪ್ಪ ಅವರು** – ಗ್ರಾಮ ಲೆಕ್ಕಿಗರ ಹುದ್ದೆಗಳನ್ನು ಪಿ.ಯು.ಸಿ. ಅಂಕಪಟ್ಟಿಗಳ ಆಧಾರದ ಮೇಲೆ ಭರ್ತಿ ಮಾಡುತ್ತಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

5) **ಶ್ರೀ ಸುನಿಲ್ ಬಿಳಿಯಾ ನಾಯ್ಕ ಅವರು** – ಉತ್ತರ ಕನ್ನಡ ಜಿಲ್ಲೆಯ ಕೆಲವು ತಾಲ್ಲೂಕಗಳ ಜನವಸತಿ ಪ್ರದೇಶವನ್ನು ಶರಾವತಿ ಅಭಯಾರಣ್ಯ ವ್ಯಾಪ್ತಿಗೆ ಒಳಪಡಿಸಿರುವುದರಿಂದ ಉಂಟಾಗಿರುವ ಸಮಸ್ಯೆಗಳ ಬಗ್ಗೆ ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರ ಗಮನ ಸೆಳೆಯುವುದು.

6) **ಶ್ರೀ ವಿ. ಮುನಿಯಪ್ಪ ಅವರು** – ಚಿಕ್ಕಬಳ್ಳಾಪುರ ಜಿಲ್ಲೆಯ ಶಿಡ್ಲಘಟ್ಟ ವಿಧಾನಸಭಾ ಕ್ಷೇತ್ರವನ್ನು ಬರಪೀಡಿತ ತಾಲ್ಲೂಕು ಎಂದು ಘೋಷಿಸುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

7) **ಶ್ರೀ ಗೂಳಿಹಟ್ಟಿ ಡಿ. ಶೇಖರ್ ಅವರು** – ಹೊಸದುರ್ಗ ನಗರಕ್ಕೆ ಶಾಶ್ವತವಾಗಿ ನೀರು ಸರಬರಾಜು ಮಾಡುವ ಬಗ್ಗೆ ಮಾನ್ಯ ನಗರಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

8) **ಶ್ರೀ ಎಸ್.ಎನ್. ಸುಬ್ಬಾರೆಡ್ಡಿ ಅವರು** – ಬಾಗೇಪಲ್ಲಿ ಕ್ಷೇತ್ರದ ಚೇಳೂರು ಹೋಬಳಿಯನ್ನು ತಾಲ್ಲೂಕು ಕೇಂದ್ರವಾಗಿ ಘೋಷಿಸಿರುವುದರಿಂದ ತಾಲ್ಲೂಕು ಮಟ್ಟದ ಕಛೇರಿಗಳನ್ನು ಸ್ಥಾಪನೆ ಮಾಡುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

9) **ಶ್ರೀ ಎಸ್.ಎನ್. ನಾರಾಯಣಸ್ವಾಮಿ ಕೆ.ಎಂ. ಅವರು** – ಬಂಗಾರಪೇಟೆ ಪುರಸಭೆ ವ್ಯಾಪ್ತಿಯಲ್ಲಿ ಒಳಚರಂಡಿ ಹಾಗೂ ರಸ್ತೆಯನ್ನು ಮಂಜೂರು ಮಾಡುವ ಬಗ್ಗೆ ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರ ಗಮನ ಸೆಳೆಯುವುದು.

10) **ಶ್ರೀ ಹರೀಶ್ ಪೂಂಜ ಅವರು** – ಬೆಳ್ತಂಗಡಿ ತಾಲ್ಲೂಕಿನ ಸೌತಡ್ಕ ಗಣಪತಿ ದೇವಸ್ಥಾನದಲ್ಲಿ ಗಂಟೆಗಳನ್ನು ಮಾರುವುದಕ್ಕೆ ಅನುಮತಿ ನೀಡಿರುವ ಬಗ್ಗೆ ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರ ಗಮನ ಸೆಳೆಯುವುದು.

ಎಂ.ಕೆ.ವಿಶಾಲಾಕ್ಷಿ
ಕಾರ್ಯದರ್ಶಿ(ಪ್ರ)
